**ಗ್ರಾಮೀಣ ನೀರು ಸರಬರಾಜು ಯೋಜನೆಯ ಅನುಷ್ಠಾನ**

**466 (756) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)** : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯಿತಿಗಳು ಪಂಚಾಯತ್ ಭವನವನ್ನು ಹೊಂದಬೇಕೆನ್ನುವ ಆಶಯ ಸರ್ಕಾರಕ್ಕೆ ಇರುವುದು ನಿಜವೇ?

ಆ) ಹಾಗಿದ್ದಲ್ಲಿ ಇದಕ್ಕಾಗಿ ಎಷ್ಟು ಹಣವನ್ನು ಈ ಆಯವ್ಯಯದಲ್ಲಿ ನಿಗದಿಪಡಿಸಲಾಗಿತ್ತು, ಈ ಪೈಕಿ ಎಷ್ಟು ಹಣವನ್ನು ರಾಜ್ಯದ ಯಾವ ಯಾವ ಪಂಚಾಯಿತಿಗೆ ಬಿಡುಗಡೆ ಮಾಡಲಾಗಿದೆ;

ಇ) ಈ ಹಣದಿಂದ ಯಾವ ಯಾವ ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯತ್ ಭವನಗಳಲ್ಲಿ ನಿರ್ಮಿಸಲಾಗಿದೆ;

ಈ) ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಭಾಲ್ಕಿ ಮತಕ್ಷೇತ್ರದ ಯಾವ ಯಾವ ಗ್ರಾಮ ಪಂಚಾಯತ್‌ಗಳಲ್ಲಿ ಈ ಭವನಗಳನ್ನು ನಿರ್ಮಿಸಲಾಗಿದೆ;

**ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು)** :

ಅ) ಹೌದು.

ಆ) 2010–11ನೇ ಸಾಲಿನ ಆಯವ್ಯಯದಲ್ಲಿ ಈ ಉದ್ದೇಶಕ್ಕೆ ಅನುದಾನ ಒದಗಿಸಿರುವುದಿಲ್ಲ.

ಆದರೆ ಆರ್.ಐ.ಡಿ.ಎಫ್.– 16 ರಡಿ ರೂ.20.00 ಕೋಟಿ ಅನುದಾನ ಒದಗಿಸಲಾಗಿದ್ದು, ಈ ಪೈಕಿ 120 ಗ್ರಾಮ ಪಂಚಾಯಿತಿ ಕಚೇರಿ ಕಟ್ಟಡ ನಿರ್ಮಾಣ ಮಾಡಲು ನಬಾರ್ಡ್‌ನ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅನುಮೋದನೆ ಬಾಕಿ ಇರುತ್ತದೆ.

ಇ) 'ಆ' ಭಾಗಕ್ಕೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಭಾಲ್ಕಿ ತಾಲ್ಲೂಕಿನ 4 ಗ್ರಾಮ ಪಂಚಾಯಿತಿ ಕಛೇರಿಗಳಿಗೆ

ಭಾರತ್ ನಿರ್ಮಾಣ್ ರಾಜೀವ್‌ಗಾಂಧಿ ಸೇವಾ ಕೇಂದ್ರ ಸ್ಥಾಪಿಸಲು ಮಂಜೂರಾತಿ ದೊರೆತಿದ್ದು, 1 ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿರುತ್ತದೆ.

**ಬೀದರ್ ಜಿಲ್ಲೆಯಲ್ಲಿ ಸರ್ವ ಋತು ರಸ್ತೆ ನಿರ್ಮಾಣ**

**467 (759) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)** : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2009–10 ಮತ್ತು 2010–11 ನೇ ಸಾಲಿನಲ್ಲಿ ಪಿಎಂಜಿಎಸ್‌ವೈ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಯ ಯಾವ ಯಾವ ಗ್ರಾಮಗಳ ಎಷ್ಟು ಕಿ.ಮೀ ರಸ್ತೆಯನ್ನು ಸರ್ವಋತು ರಸ್ತೆಯನ್ನಾಗಿ ಮಾರ್ಪಡಿಸಿದೆ;

ಆ) ಇದಕ್ಕಾಗಿ ಈ ಅವಧಿಯಲ್ಲಿ ಎಷ್ಟು ಹಣವನ್ನು ಪ್ರತಿ ವರ್ಷ ವೆಚ್ಚ ಮಾಡಿದೆ (ರಸ್ತೆವಾರು ವಿವರ ಒದಗಿಸುವುದು);

ಇ) ಈ ಪೈಕಿ ಯಾವ ಯಾವ ತಾಲ್ಲೂಕಿನಲ್ಲಿ ನಿಗಧಿತ ಸಮಯದಲ್ಲಿ ಉತ್ತಮವಾದ ರಸ್ತೆಗಳನ್ನು ನಿರ್ಮಿಸಲಾಗಿದೆ (ಸಂಸ್ಥೆಗಳು/ಗುತ್ತಿಗೆದಾರರ ಪೂರ್ಣ ವಿವರ ಒದಗಿಸುವುದು);

ಈ) ನಿಗಧಿತ ಸಮಯದಲ್ಲಿ ಉತ್ತಮವಾದ ರಸ್ತೆಗಳನ್ನು ನಿರ್ಮಿಸಲು ಕಾರಣಕರ್ತರಾದ ಗುತ್ತಿಗೆದಾರರನ್ನು ಸರ್ಕಾರ ಯಾವ ರೀತಿ ಗೌರವಿಸಿದೆ (ಪೂರ್ಣ ವಿವರ ಒದಗಿಸುವುದು)?

**ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)** :

ಅ) ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಯಲ್ಲಿ 2009–10 ನೇ ಸಾಲಿನಲ್ಲಿ 66.11 ಕಿ.ಮೀ ಉದ್ದದ ರಸ್ತೆಯನ್ನು ಸರ್ವಋತು ರಸ್ತೆಯನ್ನಾಗಿ ನಿರ್ಮಿಸಲಾಗಿದೆ.

2010–11ನೇ ಸಾಲಿನಲ್ಲಿ 85.98 ಕಿ.ಮೀ ಉದ್ದದ ರಸ್ತೆಯನ್ನು ಸರ್ವಋತು ರಸ್ತೆಯನ್ನಾಗಿ ನಿರ್ಮಿಸಲಾಗಿದೆ.

ಗ್ರಾಮವಾರು ವಿವರಗಳನ್ನು ಅನುಬಂಧದಲ್ಲಿ ನೀಡಿದೆ.